# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 121 (41)

ಸದಸ್ಯರ ಹೆಸರು , : ಶ್ರೀಮತಿ ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 13.12.2021

ಉತ್ತರಿಸುವವರು : ಅರಣ್ಯ ಹಾಗೂ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೊಡಗು ಜಿಲ್ಲೆ ಗಡಿಯಲ್ಲಿರುವ ಮಾಕುಟ್ಟ ವ್ಯಾಪ್ತಿಯ ರಕ್ಷಿತಾರಣ್ಯ ಪ್ರದೇಶದಲ್ಲಿ ಕೇರಳ ರಾಜ್ಯದ ಕಸವನ್ನು ತಂದು ಸುರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಬಂದಿದೆ |
| (ಆ) | ಬಂದಿದ್ದಲ್ಲಿ, ಮಾಕುಟ್ಟ ವ್ಯಾಪ್ತಿಯ ರಕ್ಷಿತಾರಣ್ಯ ಪ್ರದೇಶದ ಅರಣ್ಯ ಭೂಮಿಗೆ ಸಂಚಕಾರ ತಂದಿರುವ ಈ ರೀತಿಯ ಕೃತ್ಯಗಳನ್ನು ತಪ್ಪಿಸಲು ಸರ್ಕಾರ ಇದುವರೆಗೆ ಯಾವ ಕ್ರಮಗಳನ್ನು ಕೈಗೊಂಡಿದೆ; | ಮಾಕುಟ್ಟ ಅರಣ್ಯ ತನಿಖಾ ಠಾಣೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಕಟ್ಟುನಿಟ್ಟಾಗಿ ತ್ಯಾಜ್ಯ ವಸ್ತುಗಳನ್ನು ತುಂಬಿಕೊಂಡು ಬರುವಂತಹ ವಾಹನಗಳ ಮೇಲೆ ನಿಗಾ ಇಡಲು ಸೂಚಿಸಲಾಗಿದೆ.<br><br>ಮಾಕುಟ್ಟ ಅರಣ್ಯ ತನಿಖಾ ಠಾಣೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರು ಪ್ರತಿ ವಾಹನವನ್ನು ತಪಾಸಣೆಗೆ ಒಳಪಡಿಸಿ ತ್ಯಾಜ್ಯ ವಸ್ತುಗಳು ಬಂದರೆ ಸದರಿ ವಾಹನವನ್ನು ಅರಣ್ಯ ತನಿಖಾ ಠಾಣೆಯಿಂದ ಕಟ್ಟುನಿಟ್ಟಾಗಿ ವಾಪಸ್ಸು ಕಳುಹಿಸುತ್ತಿದ್ದಾರೆ. ಸಿಬ್ಬಂದಿಗಳು ಹೆದ್ದಾರಿಯಲ್ಲಿ ಯಾವುದೇ ಕಸಗಳು ಕಂಡು ಬಂದಲ್ಲಿ ತುರ್ತಾಗಿ ತೆರವುಗೊಳಿಸಿ ಸ್ವಚ್ಛತೆ ಮಾಡಿ ಕಸವನ್ನು ಹತ್ತಿರದ ಲ್ಯಾಂಡ್ ಫಿಲ್ ಸೈಟ್ ನಲ್ಲಿ ಕಸವನ್ನು ವಿಲೇವಾರಿ ಮಾಡಲಾಗಿರುತ್ತದೆ.<br><br>ಮಡಿಕೇರಿ ವನ್ಯಜೀವಿ ವಿಭಾಗ ವ್ಯಾಪ್ತಿಗೆ ಬರುವ ರಸ್ತೆಬದಿಯಲ್ಲಿ ಹಾಕಲಾದ ಕಸಗಳನ್ನು ಬೇಟೋಳಿ ಗ್ರಾಮ ಪಂಚಾಯಿತಿಯ ಸಹಯೋಗದೊಂದಿಗೆ ತೆರವುಗೊಳಿಸಲಾಗಿದ್ದು, ಮುಂದೆ ಇಂತಹ ಘಟನೆಗಳು ನಡೆಯದಂತೆ ಹೆದ್ದಾರಿಯಲ್ಲಿ ಗಸ್ತು ಕಾರ್ಯವನ್ನು ನಿರ್ವಹಿಸಲಾಗುತ್ತಿದೆ. |
| (ಇ) | ಈ ಕುರಿತು ಈಗಾಗಲೇ ಕ್ರಮಗಳನ್ನು ಕೈಗೊಂಡಿದ್ದಲ್ಲಿ, ಕೇರಳ ರಾಜ್ಯದ ಕಸವನ್ನು ತಂದು ಸುರಿಯುತ್ತಿರುವುದನ್ನು ಸಂಪೂರ್ಣವಾಗಿ ನಿಲ್ಲಿಸಲಾಗಿದೆಯೇ ? | ಮಾಕುಟ್ಟ ಅರಣ್ಯ ತನಿಖಾ ಠಾಣೆ ಸಿಬ್ಬಂದಿ ವರ್ಗದವರು ಪೆರುಂಬಾಡಿಯಿಂದ ಅರಣ್ಯ ತನಿಖಾ ಠಾಣೆಯವರೆಗೆ ಮೀಸಲು ಅರಣ್ಯದ ರಸ್ತೆಯಲ್ಲಿ ಗಸ್ತು ಸಂಚರಿಸುವ ಸಿಬ್ಬಂದಿ ವರ್ಗದವರಿಗೆ ತ್ಯಾಜ್ಯ ವಸ್ತುಗಳನ್ನು ಅರಣ್ಯದಲ್ಲಿ ಸುರಿಯುತ್ತಿರುವ ಬಗ್ಗೆ ನಿಗಾ ಇಡಲು ಕಟ್ಟುನಿಟ್ಟಾಗಿ ಸೂಚಿಸಲಾಗಿದೆ. ಪ್ರಸ್ತುತ ಸಂಪೂರ್ಣವಾಗಿ ತ್ಯಾಜ್ಯವನ್ನು ಸುರಿಯುವುದನ್ನು ನಿಲ್ಲಿಸಲಾಗಿದೆ. |

ಸಂಖ್ಯೆ: ಅಪಜೀ 175 ಎಫ್ ಎ ಎಫ್ 2021

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ ಮತ್ತು ನಾಗರೀಕ ಸರಬರಾಜು
ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು